# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 06.04.2022 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71 |
| 2 | ಜಯಂತ್ ಕುಮಾರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ಚಂದ್ರಶೇಖರ್ | ಸಹಾಯಕ ಅಭಿಯಂತರರು |
| 4 | ವೆಂಕಟರಾಜು | ಸದಸ್ಯರು |
| 5 | ಕೆ ಶಿವಲಿಂಗೇಗೌಡ | ತೋಟಗಾರಿಕೆ |
| 6 | ಕಮಲಪ್ಪ | ಕಿರಿಯ ಆರೋಗ್ಯ ಪರಿವೀಕ್ಷಕರು |
| 7 | ಗಂಗರೆಡ್ಡಿ | ಕಂದಾಯ ಪರಿವೀಕ್ಷಕರು |
| 8 | ಮುರುಳೀಧರ್ ಕೆ.ಎಲ್ | ಕಂದಾಯ ವಸೂಲಿಗಾರರು |
| 9 | ಅನುಪಮ ಎನ್ | ಕಂದಾಯ ವಸೂಲಿಗಾರರು |
| 10 | ಹೆಚ್ ಟಿ ಮುನಿರಾಜು | ಕಂದಾಯ ವಸೂಲಿಗಾರರು |
| 11 | ರಾಮಣ್ಣ | ಕಿರಿಯ ಆರೋಗ್ಯ ಪರಿವೀಕ್ಷಕರು |

:ನಡಾವಳಿಯ ವರದಿ:

- ಕಾರ್ಯದರ್ಶಿಗಳಾದ ಶ್ರೀ ಜಯಂತ್ ಕುಮಾರ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

* **ವಿಷಯ ಸಂಖ್ಯೆ: 1:– ಉದ್ಯಾನವನಗಳಲ್ಲಿನ ವಿದ್ಯುತ್ ದೀಪಗಳನ್ನು ಅಳವಡಿಸುವ ಬಗ್ಗೆ**

ಸದಸ್ಯರಾದ ವೆಂಕಟರಾಜು ರವರು ಪತ್ರವನ್ನು ನೀಡಿ, ವಾರ್ಡ್ ನಂ.71ರ ವ್ಯಾಪ್ತಿಯಲ್ಲಿರುವ ಉದ್ಯಾನವನಗಳಲ್ಲಿ ಹಲವು ಬಾರಿ ಮೌಖಿಕವಾಗಿ ಕೋರಿದ್ದರೂ ಸಹ ವಿದ್ಯುತ್ ದೀಪಗಳನ್ನು ಅಳವಡಿಸಿರುವುದಿಲ್ಲ, 2022–23ರ ಬಜೆಟ್ ನ್ನಲ್ಲಿ ಈ ಸಂಬಂಧ ಅನುದಾನವನ್ನು ಕಾದಿರಿಸಬೇಕೆಂದು ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿ ರವರು ಮಾತನಾಡಿ, ಉದ್ಯಾನವನಗಳಲ್ಲಿ ನಿರ್ವಹಣೆಯನ್ನು ಯೋಜನಾ ವಿಭಾಗ, ದಾಸರಹಳ್ಳಿ ರವರು ನಿರ್ವಹಿಸುತ್ತಿದ್ದು, ಈ ವಿಷಯವನ್ನು ಸದರಿಯವರ ಗಮನಕ್ಕೆ ತಂದು ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

**ವಿಷಯ ಸಂಖ್ಯೆ: 2:– BBMP SAHAYA APP:**

* ಜಯಂತ್ ಕುಮಾರ್, ಸಹಾಯಕ ಅಭಿಯಂತರರು, ವಾರ್ಡ್ ನಂ.71 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
* ರಾಮಣ್ಣ, ಹಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇ ಸಮಸ್ಯೆ ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

**ವಿಷಯ ಸಂಖ್ಯೆ: 3:– ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ನೋಟೀಸ್ ಜಾರಿ ಮಾಡಿರುವ ಬಗ್ಗೆ:**
ನೋಡಲ್ ಅಧಿಕಾರಿಗಳು ಮಾತನಾಡಿ, ವಾರ್ಡ್‌ನ ಹಲವು ಕಡೆಗಳಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ರಸ್ತೆ ಅಗೆದಿದ್ದು Restoration ಮಾಡಿರುವುದಿಲ್ಲ ಎಂಬುದಾಗೀ ದೂರುಗಳು ಬಂದಿರುವ ಸಂಬಂಧ ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ ತೆಗೆದುಕೊಂಡ ಕ್ರಮಗಳ ಕುರಿತು ಸಭೆಯಲ್ಲಿ ಪ್ರಸ್ತಾಪಿಸಿದರು.

ಇದಕ್ಕೆ ವಾರ್ಡ್ 71ರ ಸಹಾಯಕ ಅಭಿಯಂತರರು, ಪ್ರತಿಕ್ರಿಯಿಸಿ ಈ ಸಂಬಂಧವಾಗಿ ತುರ್ತಾಗಿ Restoration ಅನ್ನು ಮಾಡುವಂತೆ ತಿಳಿಸಿ ಬಿ.ಡಬ್ಲ್ಯೂ.ಎಸ್.ಎಸ್.ಬಿ & ಬೆಸ್ಕಾಂ ಇಲಾಖೆ ಅಧಿಕಾರಿಗಳಿಗೆ ನೋಟೀಸ್ ನೀಡಿರುವುದಾಗೀ ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➤ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಜಯಂತ್ ಕುಮಾರ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ 71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ